# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 556(692)
ಮಾನ್ಯ ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ(ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 14.12.2020
ಉತ್ತರಿಸುವ ಸಚಿವರು : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಚಿವರು.

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಅನುದಾನಿತ ಶಾಲಾ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಬೋಧಕ/ಬೋಧಕೇತರರಿಗೆ ಆರೋಗ್ಯ ಜ್ಯೋತಿ ಸಂಜೀವಿನಿ ಯೋಜನೆಯಲ್ಲಿ ಸೇರಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ. |
| ಆ | ಅನುದಾನಿತ ಶಾಲಾ ಕಾಲೇಜಿನ ನೌಕರರು ದೀರ್ಘ ಕಾಲದಿಂದ ಈ ಯೋಜನೆ ಸೌಲಭ್ಯದಿಂದ ವಂಚಿತರಾಗಿ, ತೊಂದರೆ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ. |
| ಇ | ಸದರಿಯವರನ್ನು ಜ್ಯೋತಿ ಸಂಜೀವಿನಿ ವ್ಯಾಪ್ತಿಗೆ ತರಲು ಇರುವ ಕಾನೂನು ತೊಡಕುಗಳೇನು (ವಿವರ ನೀಡುವುದು) | ಅನುದಾನಿತ ಶಾಲಾ ಕಾಲೇಜುಗಳ ನೌಕರರು ಕರ್ನಾಟಕ ಶಿಕ್ಷಣ ಅಧಿನಿಯಮ, 1983 ಮತ್ತು ಅದರಡಿ ರಚಿಸಲ್ಪಟ್ಟ ಕರ್ನಾಟಕ ಶಿಕ್ಷಣ ಸಂಸ್ಥೆಗಳ (classification, regulation and prescription of curricula) ನಿಯಮಗಳು, 1995ರ ವ್ಯಾಪ್ತಿಗೆ ಒಳಪಡುತ್ತಾರೆ. ಇವರನ್ನು ಸರ್ಕಾರಿ ನೌಕರರೆಂದು ಪರಿಗಣಿಸಲಾಗುವುದಿಲ್ಲ. ಆದುದರಿಂದ ಅವರಿಗೆ ಜ್ಯೋತಿ ಸಂಜೀವಿನಿ ಯೋಜನೆ ಅನ್ವಯವಾಗುವುದಿಲ್ಲ.<br>ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963ರ ವ್ಯಾಪ್ತಿಗೆ ಒಳಪಡಿಸುವುದಿಲ್ಲ ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆಗಳು( ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ ಹಾಗೂ ಸೇವಾ ಷರತ್ತು ಹಾಗೂ ನಿಬಂಧನೆಗಳು) ನಿಯಮಗಳು 1999ರ ಅನುಬಂಧ-ii (3)ರನ್ವಯ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯಕ್ಕೂ ಅರ್ಹರಾಗಿರುವುದಿಲ್ಲ. |
| ಈ | ಸದರಿಯವರನ್ನು ಜ್ಯೋತಿ ಸಂಜೀವಿನಿ ವ್ಯಾಪ್ತಿಗೆ ಯಾವ ಕಾಲಮಿತಿಯಲ್ಲಿ ಸೇರಿಸಲಾಗುವುದು? | ಉಪಪ್ರಶ್ನೆ 'ಇ'ರಂತೆ ಉದ್ಭವಿಸುವುದಿಲ್ಲ. |

ಸಂ:ಇಪಿ 283 ಎಸ್‌ಇಎಸ್ 2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು